ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2273
ಸದಸ್ಯರ ಹೆಸರು	:	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	21.03.2022.
ಉತ್ತರಿಸುವವರು	:	ಅರಣ್ಯ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಕಾಡಾನೆ, ಹುಲಿ ಸೇರಿದಂತೆ ವನ್ಯಜೀವಿಗಳ ಉಪಟಳ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುತ್ತದೆ.
ಆ)	ಬಂದಿದ್ದಲ್ಲಿ, ಇದರ ಶಾಶ್ವತ ನಿಯಂತ್ರಣಕ್ಕೆ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಕೊಡಗು ಜಿಲ್ಲೆಯಲ್ಲಿ ಮಾನವ-ಆನೆ ಸಂಘರ್ಷ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಅರಣ್ಯ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿದೆ:-
ಇ)	ಯಾವ ರೀತಿಯ ವೈಜ್ಞಾನಿಕ ಹಾಗೂ ನಿರ್ದಿಷ್ಟವಾದ ಕ್ರಮಗಳನ್ನು ಸರ್ಕಾರ ಅಳವಡಿಸಿಕೊಳ್ಳುವ ಮೂಲಕ ವನ್ಯಜೀವಿ ಮಾನವ ಸಂಘರ್ಷವನ್ನು ನಿಯಂತ್ರಿಸಲಾಗಿದೆ. (ವಿವರಗಳನ್ನು ನೀಡುವುದು)	1. ಕಾಡಾನೆ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಈವರೆಗೆ 9.51 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿನಲ್ಲಿ 10.00 ಕಿ.ಮೀ. ರೈಲ್ವೆ ಬ್ಯಾರಿಕೇಡ್ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. 2. ಅರಣ್ಯದಂಚಿನ ಗ್ರಾಮಗಳಲ್ಲಿ ಆನೆಗಳು ಕಾಡಿನಿಂದ ನಾಡಿಗೆ ಬಾರದಂತೆ ಈವರೆಗೆ 50.00 ಕಿ.ಮೀ. ಸೋಲಾರ್ ತಂತಿಬೇಲಿ ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿನಲ್ಲಿ 51.37 ಕಿ.ಮೀ. ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. 3. ಅರಣ್ಯದಂಚಿನ ಗ್ರಾಮಗಳಲ್ಲಿ ಆನೆಗಳು ಕಾಡಿನಿಂದ ನಾಡಿಗೆ ಬಾರದಂತೆ ಈವರೆಗೆ 96.00 ಕಿ.ಮೀ. ಆನೆ ತಡೆ ಕಂದಕ ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿಗೆ 45.41 ಕಿ.ಮೀ. ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. 4. ಅರಣ್ಯದಂಚಿನ ಗ್ರಾಮಗಳಲ್ಲಿ ರೈತರಿಗೆ ಸೋಲಾರ್ ಬೇಲಿ ನಿರ್ಮಾಣವನ್ನು ಕೈಗೊಳ್ಳಲು ಅರಣ್ಯ ಇಲಾಖೆಯಿಂದ ಶೇಕಡ 50ರಷ್ಟು ಸಹಾಯಧನ ನೀಡಲಾಗುತ್ತಿದ್ದು ಈವರೆಗೆ 21.51 ಕಿ.ಮೀ. ನಿರ್ಮಾಣ ಮಾಡಲಾಗಿದ್ದು, 2021-22ನೇ ಸಾಲಿನಲ್ಲಿ 15.75 ಕಿ.ಮೀ. ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. 5. ಕೊಡಗು ಜಿಲ್ಲೆಯಲ್ಲಿ ಅರಣ್ಯ ಸುತ್ತಮುತ್ತ ಕಾಡಾನೆ/ ವನ್ಯಪ್ರಾಣಿ ಹಾವಳಿ ಉಂಟಾದ ಸಂದರ್ಭಗಳಲ್ಲಿ ತುರ್ತಾಗಿ ಪರಿಸ್ಥಿತಿ ನಿಭಾಯಿಸಲು 12 ಕ್ಷಿಪ್ರ ಸ್ಪಂದನಾ ತಂಡಗಳನ್ನು ರಚಿಸಿ ಕಾರ್ಯ ನಿರ್ವಹಿಸಲಾಗುತ್ತಿದೆ.

ಕ್ರ. ಸಂ.	ಪ್ರಶ್ನೆ	ಉತ್ತರ
		6. ವನ್ಯಪ್ರಾಣಿಗಳು ಅರಣ್ಯ ಪ್ರದೇಶದಿಂದ ಸಾರ್ವಜನಿಕರ ವಸಹಾತುಗಳಿಗೆ ನುಗ್ಗಿ ಹಾವಳಿ ನಡೆಸುವುದನ್ನು ನಿಯಂತ್ರಿಸಲು 21 ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾರ್ಯ ನಿರ್ವಹಿಸಲಾಗುತ್ತಿದೆ. 7. ಅರಣ್ಯ ಸಂಪತ್ತು ಮತ್ತು ವನ್ಯಜೀವಿ ಸಂರಕ್ಷಣಾ ಕಾರ್ಯಗಳು ಮುಖ್ಯವಾಗಿ ವನ್ಯಜೀವಿ ಸಂಕುಲಗಳನ್ನು ಬೇಟೆಗಾರರಿಂದ ರಕ್ಷಿಸಿ ನಿರ್ವಹಿಸುವ ಕೆಲಸಗಳಿಗಾಗಿ 78 ಕಳ್ಳ ಬೇಟೆ ತಡೆ ಶಿಬಿರಗಳನ್ನು ಅತ್ಯಂತ ಸೂಕ್ಷ್ಮ ಪ್ರದೇಶಗಳಲ್ಲಿ ಸ್ಥಾಪಿಸಿ ನಿರ್ವಹಿಸಲಾಗುತ್ತಿದೆ. 8. ಅರಣ್ಯ ಪ್ರದೇಶದಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು 2019-20ನೇ ಸಾಲಿನಿಂದ ಹೊಸ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಹಂತ ಹಂತವಾಗಿ ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅವಕಾಶ ಮಾಡಲಾಗಿದೆ. 9. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ. 10. ಕಾಡಾನೆಗಳ ಚಲನ ವಲನ ಕುರಿತು ಮಾಹಿತಿ ನೀಡುವ Early Warning System ತಂತ್ರಾಂಶವನ್ನು ರೂಪಿಸಲಾಗಿದೆ. 11. ವನ್ಯಪ್ರಾಣಿಗಳ ದಾಳಿಯಿಂದ ಭಾದಿತ ಗ್ರಾಮಗಳ ಜನರೊಂದಿಗೆ ಸಂಪರ್ಕ ಸಭೆಯನ್ನು ನಡೆಸಲಾಗುತ್ತಿದೆ. 12. ಕೊಡಗು ಜಿಲ್ಲೆಯಲ್ಲಿ 2014ರಿಂದ ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ 11 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರ ಮಾಡಲಾಗಿರುತ್ತದೆ. 13. ಕೊಡಗು ಜಿಲ್ಲೆಯಲ್ಲಿ 9 ಆನೆಗಳಿಗೆ ರೇಡಿಯೋ ಕಾಲರ್ ಗಳನ್ನು ಅಳವಡಿಸಿ ಅವುಗಳ ಚಲನವಲನಗಳ ಬಗ್ಗೆ ನಿಗಾವಹಿಸಲಾಗುತ್ತಿದೆ. 14. ಕೊಡಗು ಜಿಲ್ಲೆಯ ನಾಗರಹೊಳೆ ವ್ಯಾಪ್ತಿಯಲ್ಲಿ ರಕ್ಷಣಾ ಕೆಲಸಗಳಿಗಾಗಿ ಎಸ್.ಟಿ.ಪಿ.ಎಫ್ ತಂಡ ನೇಮಕ ಮಾಡಿ ರಕ್ಷಣಾ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.

......3

ಕ್ರ. ಸಂ.	ಪ್ರಶ್ನೆ	ಉತ್ತರ
		15. ಹುಲಿ ಹಾವಳಿ ಕಂಡುಬಂದಂತಹ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅರಿವು ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡಲಾಗುತ್ತಿದೆ ಹಾಗೂ ಹಾವಳಿ ತಡೆಗಟ್ಟಲು 3-4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ಹಗಲು-ರಾತ್ರಿ ಗಸ್ತು ಮಾಡಲು ಮತ್ತು ಹುಲಿ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ಧತೆ ಮಾಡಿಕೊಂಡು, ಅವಶ್ಯವಿದ್ದಲ್ಲಿ ಸೆರೆಹಿಡಿದು ಸೂಕ್ತವಾದ ಆವಾಸ ಸ್ಥಾನಕ್ಕೆ ಬಿಡಲಾಗುತ್ತಿದೆ. 16. ಚಿರತೆ ಹಾವಳಿ ಕಂಡುಬಂದಂತಹ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅರಿವು ನೀಡುವುದಲ್ಲದೇ, ಅದರಲ್ಲೂ ಕಾಡಂಚಿನಲ್ಲಿ ವಾಸಿಸುವ ಜನರಿಗೆ ಹೆಚ್ಚಿನ ತಿಳುವಳಿಕೆ ನೀಡಲಾಗುತ್ತಿದೆ ಹಾಗೂ ಹಾವಳಿ ತಡೆಗಟ್ಟಲು 3-4 ಜನರನ್ನೊಳಗೊಂಡ ರಕ್ಷಣಾ ಪಡೆಯನ್ನು ರಚಿಸಿ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನಸಂಪರ್ಕ ಸಭೆ ನಡೆಸಲು ಹಾಗೂ ಮುಂಜಾಗ್ರತಾ ಕ್ರಮವಾಗಿ ಹಾವಳಿ ಇರುವ ಕಡೆ ಹಗಲು-ರಾತ್ರಿ ಗಸ್ತು ಮಾಡಲು ಮತ್ತು ಚಿರತೆ ಹಿಡಿಯಲು ಬೇಕಾದ ಬೋನು, Tranquilizer Gun ಮತ್ತಿತರೆ ಉಪಕರಣಗಳನ್ನು ಸಿದ್ಧತೆ ಮಾಡಿಕೊಂಡು, ಅವಶ್ಯವಿದ್ದಲ್ಲಿ ಸೆರೆಹಿಡಿದು ಸೂಕ್ತವಾದ ಆವಾಸ ಸ್ಥಾನಕ್ಕೆ ಬಿಡಲಾಗುತ್ತಿದೆ.
ಈ)	ವೈಜ್ಞಾನಿಕ ಹಾಗೂ ಸೂಕ್ತ ರೀತಿಯ ನಿಯಂತ್ರಣ ಕ್ರಮಗಳನ್ನು ತೆಗೆದುಕೊಂಡಿದ್ದಲ್ಲಿ, ಜಿಲ್ಲೆಯಲ್ಲಿ ಇತ್ತೀಚಿನ ವರ್ಷಗಳಲ್ಲಿ ವನ್ಯಜೀವಿ-ಮಾನವ ಸಂಘರ್ಷ ಪ್ರಕರಣಗಳು ಕಡಿಮೆಯಾಗಿವೆಯೇ? (ಸಂಪೂರ್ಣ ವಿವರ ನೀಡುವುದು)	ವನ್ಯಜೀವಿ-ಮಾನವ ಸಂಘರ್ಷ ನಿಯಂತ್ರಣಕ್ಕೆ ಮೇಲಿನಂತ ಕ್ರಮ ತೆಗೆದುಕೊಳ್ಳಲಾಗಿರುತ್ತದೆ. ಆದಾಗ್ಯೂ ಮೂರು ವರ್ಷಗಳಲ್ಲಿ ಸಂಭವಿಸಿದ ವನ್ಯಪ್ರಾಣಿಗಳಿಂದ ಉಂಟಾದ ಹಾನಿ ಪ್ರಕರಣಗಳಿಗೆ ಪಾವತಿಸಿದ ದಯಾತ್ಮಕ ಧನದ ವಿವರಗಳನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ.

ಸಂಖ್ಯೆ: ಅಪಜೀ 64 ಎಫ್ ಡಬ್ಲ್ಯೂಎಲ್ 2022

(ಉಮೇಶ್ ವಿ. ಕತ್ತಿ)
ಅರಣ್ಯ, ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

ಅನುಬಂಧ

ವನ್ಯಪ್ರಾಣಿ ಹಾವಳಿಯಿಂದ ಬೆಳೆಹಾನಿ ಮತ್ತು ಇತರೆ ಪ್ರಕರಣಗಳಿಗೆ ದಯಾತ್ಮಕ ಪರಿಹಾರ ಪಾವತಿಸಿರುವ ವಿವರದ ತಖ್ತೆ (15.02.2022ರ ಅಂತ್ಯಕ್ಕೆ) (ಮೊತ್ತ ರೂ.ಲಕ್ಷಗಳಲ್ಲಿ)

ವಿಭಾಗ	ಬಿಡುಗಡೆಯಾದ ಅನುದಾನ ರೂ.ಲಕ್ಷಗಳಲ್ಲಿ	ಕೃಷಿ ನಷ್ಟ		ಸಾಕು ಪ್ರಾಣಿ ನಷ್ಟ		ಮಾನವ ಪ್ರಾಣ ಹಾನಿ		ಮಾನವ ಗಾಯ		ಮಾಶಾಸನ		ಆಸ್ತಿ ನಷ್ಟ		ಒಟ್ಟು	
		ಪ್ರಕರಣ	ಮೊತ್ತ	ಪ್ರಕರಣ	ಮೊತ್ತ	ಪ್ರಕರಣ	ಮೊತ್ತ	ಪ್ರಕರಣ	ಮೊತ್ತ	ಪ್ರಕರಣ	ಮೊತ್ತ	ಪ್ರಕರಣ	ಮೊತ್ತ	ಪ್ರಕರಣ	ಮೊತ್ತ
1	2	3	4	5	6	7	8	9	10	11	12	13	14	15	16
2019-20															
ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ಹುಣಸೂರು	65.00	894	50.98	110	8.65	-	-	7	2.8510	-	-	37	2.282	1048	64.76
ಮಡಿಕೇರಿ ವಿಭಾಗ	77.00	1259	73.03	7	0.64	1	0	4	1.8100	0	0	0	0.000	1271	75.48
ವಿರಾಜಪೇಟೆ ವಿಭಾಗ	93.00	1246	84.61	16	1.52	1	0	7	1.9150	0	0	2	0.180	1272	88.23
ವನ್ಯಜೀವಿ ವಿಭಾಗ, ಮಡಿಕೇರಿ	61.00	744	43.94	27	2.7	2	10.00	2	0.6300	0	0	39	3.730	814	61.00
ಒಟ್ಟು	296.00	4143	252.56	160	13.51	4	10.00	20	7.2060	0	0	78	6.192	4405	289.47
2020-21															
ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ಹುಣಸೂರು	105.48	1314	71.71	46	0.00	2	0.00	6	1.4500	-	-	44	32.320	1412	105.48
ಮಡಿಕೇರಿ ವಿಭಾಗ	103.00	1428	96.44	5	0.44	3	0	3	5.3100	0	0	0	0.000	1439	102.19
ವಿರಾಜಪೇಟೆ ವಿಭಾಗ	97.18	1430	94.05	1	0.10	3	0	2	2.4400	0	0	4	0.580	1440	97.17
ವನ್ಯಜೀವಿ ವಿಭಾಗ, ಮಡಿಕೇರಿ	52.00	797	48.30	3	0.30	0	0	0	0.0000	0	0	34	3.400	834	52.00
ಒಟ್ಟು	357.66	4969	310.50	55	0.84	8	0.00	11	9.2000	0	0	82	36.300	5125	356.84
2021-22															
ನಾಗರಹೊಳೆ ರಾಷ್ಟ್ರೀಯ ಉದ್ಯಾನವನ, ಹುಣಸೂರು	97.00	884	49.880	62	8.98	5	29.50	3	0.74	7	1.36	106	6.53	1067	96.99
ಮಡಿಕೇರಿ ವಿಭಾಗ	120.50	1487	97.52	12	2.75	3	22.50	1	1.53	3	0.24	4	0.40	1510	124.94
ವಿರಾಜಪೇಟೆ ವಿಭಾಗ	143.38	1520	82.09	12	2.9	2	15.00	10	2.50	4	0.46	16	1.80	1564	141.90
ವನ್ಯಜೀವಿ ವಿಭಾಗ.	37.42	586	33.97	5	1.45	0	0	0	0	0	0	20	2.00	611	37.42
ಒಟ್ಟು	398.30	4477	263.46	91	16.08	10	67.00	14	4.77	14	2.06	146	10.73	4752	401.25

17/3/22

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,
(ವನ್ಯಜೀವಿ) ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರು,
ಕರ್ನಾಟಕ, ಬೆಂಗಳೂರು.